ಮಂಗಳವಾರ 05.08.2025 ಬೆಂಗಳೂರು ಗ್ರಾಮಾಂತರ ಬೆಲೆ: 5ರೂ, 2 ಪುಟಗಳು ಸಂಪುಟ 01 - ಸಂಚಿಕೆ 16 Digital Varthe Kannada Daily Volume 01 - Issue 16 Tuesday 05.08.2025 Price: 5/- Rs 2 Pages Bangalore Rural

DIGITAL VARTHE
www.digitalvarthe.com

# ಡಿಜಿಟಲ್ ವಾರ್ತೆ

RNI: KNKAN/25/A1348 ಕನ್ನಡಿಗರ ಶಕ್ತಿ ಕನ್ನಡ ದಿನಪತ್ರಿಕೆ

ಅಭಿಷೇಕ್ ಚಿಕ್ಕಮಾರನಹಳ್ಳಿ
ಸಂಪಾದಕರು

ಪುರುಷೋತ್ತಮ್ ಬಿ.ಹೆಚ್
ವ್ಯವಸ್ಥಾಪಕರು

digitalvarthe@gmail.com

# ನೆಲಮಂಗಲ ಮಾನ ತೆಗೆಯುತ್ತಿದೆ ರಸ್ತೆ ಗುಂಡಿ

## ಗುಂಡಿಮಯವಾಗಿದೆ ಕುಣಿಗಲ್ ಬೈಪಾಸ್ ರಸ್ತೆ | ಮಳೆ ಬಂದರೆ ಕೃತಕ ಕೆರೆ ನಿರ್ಮಾಣ

**ಪುರುಷೋತ್ತಮ ಬಿ ಹೆಚ್, ಡಿಜಿಟಲ್ ವಾರ್ತೆ**

ನೆಲಮಂಗಲದ ಮೂಲೆ ಮೂಲೆಗಳಲ್ಲೂ ಅಭಿವೃದ್ಧಿಯದ್ದೇ ಚರ್ಚೆ, ಎಲ್ಲಿ ಕೇಳಿದರೂ ಸಾವಿರಾರು ಕೋಟಿ ಹಣದಲ್ಲಿ ತಾಲೂಕು ಅಭಿವೃದ್ಧಿಯಾಗುತ್ತಿದೆ ಎನ್ನುವ ಮಾತುಗಳದ್ದೆ ಕಾರು ಬಾರು. ಆದ್ರೆ ಕಾರಲ್ಲಿ ಹೋದರೂ ಬೆನ್ನು ಮೂಲೆ ಮುರಿಯೋ ರಸ್ತೆ ನೆಲಮಂಗಲ ತಾಲೂಕಿನ ಮರ್ಯಾದೆ ತೆಗೆಯುತ್ತಿದೆ.

ಹಾಸನ ರಸ್ತೆ ಹಾಗೂ ತುಮಕೂರು ರಸ್ತೆ ಸಂಧಿಸುವ ಕುಣಿಗಲ್ ಬೈಪಾಸ್ ಮುಖಾಂತರ ನೆಲಮಂಗಲ ನಗರಕ್ಕೆ ಸಂಪರ್ಕಿಸುವ ಈ ರಸ್ತೆ ಸಂಪೂರ್ಣ ಗುಂಡಿಮಯವಾಗಿದೆ. ಒಂದು ವೇಳೆ ಮಳೆ ಬಂದರೆ ಇಲ್ಲಿ ಕೃತಕ ಕೆರೆ ಸೃಷ್ಟಿಯಾಗುವ ಮುಖಾಂತರ ಈ ರಸ್ತೆಯಲ್ಲಿ ವಾಹನ ಸವಾರರು ಪರದಾಡುವ ಪರಿಸ್ಥಿತಿ ಎದುರಾಗುವುದು ಅಕ್ಷರಶಃ ಸತ್ಯ. ಪಾದಾಚಾರಿಗಳಂತು ಬೆಂಕಿ ಮೇಲಿನ ನಡಿಗೆ ಮಾಡುವಂತ ಪರಿಸ್ಥಿತಿ ಎದುರಾಗಿದ್ದು, ಪಾದಾಚಾರಿಗಳು ನಡೆದು ಹೋಗುವಾಗ ಮಳೆ ನೀರಿನಲ್ಲಿ ಸಂಚರಿಸುವ ವಾಹನಗಳಿಂದ ಸಿಡಿಯುವ ಕೊಚ್ಚೆ ನೀರು ಪಾದಚಾರಿಗಳ ಆಕ್ರೋಶಕ್ಕೆ ಕಾರಣವಾಗಿದೆ.

ಮಳೆಯದ್ದು ಒಂದು ಕಥೆಯಾದರೆ ಬೇಸಿಗೆ ಬೇರೊಂದು ಕತೆಯನ್ನೇ ಹೇಳುತ್ತದೆ, ಬಿರು ಬಿಸಿಲಿನ ದೂಳು ಮಣ್ಣು ವಾಹನ ಸವಾರರನ್ನ ಹೈರಾಣಾಗಿಸುತ್ತದೆ



ನಗರದ ಕುಣಿಗಲ್ ಬೈಪಾಸ್ ನಲ್ಲಿ ರಸ್ತೆ ಹಾಳಾಗಿದ್ದು ಮಳೆ ಹಿನ್ನೆಲೆ ರಸ್ತೆಯ ತುಂಬೆಲ್ಲಾ ನೀರು ನಿಂತಿರುವುದು

ನೆಲಮಂಗಲ ತಾಲೂಕಿನಲ್ಲಿ ಅಭಿವೃದ್ಧಿ ಹೆಸರಿನಲ್ಲಿ ಕೇವಲ ಗುದ್ದಲಿ ಪೂಜೆಗಳು ನಡೆಯುತ್ತಿವೆ, ರಸ್ತೆಗಳಿಗೆ ಡಾಂಬರ್ ಹಾಕುವುದನ್ನೇ ಅಭಿವೃದ್ಧಿ ಎಂದುಕೊಂಡಿದ್ದಾರೆ ಅನಿಸುತ್ತೆ ಇಂದಿನ ಜನಪ್ರತಿನಿಧಿಗಳು. ನಗರದ ಹೆಬ್ಬಾಗಿಲಿನಲ್ಲಿ ಇರುವ ಈ ನರಕ ದರ್ಶನ ತಾಲೂಕಿನ ಗೌರವವನ್ನ ಹಾಳುಮಾಡುತ್ತಿದೆ.



**-ಕನಕರಾಜು ಜಿ ಎನ್**
**ಜೆಡಿಎಸ್ ಮುಖಂಡರು**

## ಭೂಗತ ಕೇಬಲ್ ಇಂದ ಮತ್ತಷ್ಟು ಹಾನಿ

ನೆಲಮಂಗಲ ನಗರದ ಮುಖ್ಯ ರಸ್ತೆಗಳಲ್ಲಿ ಭೂಗತ ವಿದ್ಯುತ್ ಕೇಬಲ್ ಗಳನ್ನ ಅಳವಡಿಸುತ್ತಿದ್ದು ಇದು ಇತ್ತೀಚೆಗೆ ದುರಸ್ತಿಯಾಗಿದ್ದ ರಸ್ತೆಗಳನ್ನ ಮತ್ತೆ ಮೃತ್ಯಕೂಪಕ್ಕೆ ತಳ್ಳುತ್ತಿದೆ. ಪುಟ್ ಪಾತ್ ಗಳನ್ನ ಅಗೆದಿರುವ ಗುತ್ತಿಗೆದಾರರು ಅದನ್ನ ಮತ್ತೆ ಸೂಕ್ತ ಕ್ರಮದಲ್ಲಿ ಮುಚ್ಚದೆ ಸಂಚಾರ ಅಸ್ತವ್ಯಸ್ತ ಆಗುತ್ತಿದೆ.

ಅಲ್ಲದೆ ಭೂಗತ ಕೇಬಲ್ ಅಳವಡಿಕೆಯಿಂದ ನಗರದ ಪ್ರಮುಖ ವೃತ್ತಗಳಲ್ಲಿ ಸಂಚಾರ ದಟ್ಟಣೆ ಸಹ ಹೆಚ್ಚಾಗುತ್ತಿದ್ದೆ, ರಸ್ತೆ ಅಗೆತದಿಂದ ನಗರದ ಸೌಂದರ್ಯ ಸಹ ಹಾಳಾಗುತ್ತಿದೆ ಎಂದು ಸಾರ್ವಜನಿಕರು ಆರೋಪಿಸುತ್ತಿದ್ದಾರೆ.



ಭೂಗತ ಕೇಬಲ್ ಅಳವಡಿಕೆ ಕಾಮಗಾರಿ ಹಿನ್ನೆಲೆ ಸಂಚಾರ ದಟ್ಟಣೆ

ಬೆಳಗ್ಗೆ ನಾನು ಕೆಲಸಕ್ಕೆ ಹೋಗಲೆಂದು ಕುಣಿಗಲ್ ಬೈಪಾಸ್ ಬಳಿ ಬಸ್ ಇಳಿದು ನೆಡೆದುಕೊಂಡು ಹೋಗುತ್ತಿದೆ, ರಸ್ತೆಯಲ್ಲಿ ಕಾರು ಬಂದ ಹಿನ್ನೆಲೆ ರಸ್ತೆ ಗುಂಡಿಗಳಲ್ಲಿ ನಿಂತಿದ್ದ ಕೆಸರು ನೀರು ನನ್ನ ಮೇಲೆ ಸಿಡಿದು ಬಟ್ಟೆ , ಬ್ಯಾಗ್ ಎಲ್ಲಾ ಹಾಳಾಯಿತು. ಈಗ ನಾನು ಕೆಲಸಕ್ಕೆ ತೆರಳದೆ ಮರಳಿ ಮನೆಗೆ ಹೋಗುವ ಪರಿಸ್ಥಿತಿ ಎದುರಾಗಿದ್ದು ಸಂಬಂಧಪಟ್ಟವರು ಕೂಡಲೇ ಈ ಸಮಸ್ಯೆಯನ್ನು ಬಗೆಹರಿಸಬೇಕಿದೆ.

**-ಹೆಸರು ಹೇಳಲು ಇಚ್ಛಿಸದ ಸಾರ್ವಜನಿಕರು**

# ಧರ್ಮಸ್ಥಳದಲ್ಲಿ ಮತ್ತೆ ಹಲವು ಅವಶೇಷಗಳು ಪತ್ತೆ!



ಡಿಜಿಟಲ್ ವಾರ್ತೆ, ಧರ್ಮಸ್ಥಳ: ಮಂಗಳೂರು: ಧರ್ಮಸ್ಥಳ ಸಾಮೂಹಿಕ ಅಂತ್ಯಕ್ರಿಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಸಾಕ್ಷಿ-ದೂರುದಾರರು ತೋರಿಸಿರುವ ಸಮಾಧಿ ಸ್ಥಳಗಳಲ್ಲಿ ಅಗೆಯುವಿಕೆಯನ್ನು ನಡೆಸುತ್ತಿರುವ ವಿಶೇಷ ತನಿಖಾ ತಂಡ (ಎಸ್ಐಟಿ) ಇಂದು ಪಾಯಿಂಟ್ 11ರ ಪಕ್ಕದಲ್ಲಿ ಬಳಿ ಮಾನವ ಅಸ್ಥಿಪಂಜರ ಅವಶೇಷಗಳು ಕಂಡುಬಂದಿವೆ.

ಸೋಮವಾರ ಬೆಳಗ್ಗೆ 11 ಗಂಟೆ ಸುಮಾರಿಗೆ ಸ್ಥಳ ಸಂಖ್ಯೆ 11 ರಲ್ಲಿ ಅಗೆಯುವಿಕೆಯನ್ನು ಪುನರಾರಂಭಿಸಲು ಎಸ್ಐಟಿ ಅಧಿಕಾರಿಗಳು ಮತ್ತು ದೂರುದಾರರು ಧರ್ಮಸ್ಥಳ ಗ್ರಾಮದ ಹೆದ್ದಾರಿ ಬದಿಯ ಅರಣ್ಯ ಪ್ರದೇಶವನ್ನು ಪ್ರವೇಶಿಸಿದ್ದರು. ಆದರೆ ಗುರುತಿಸಿದ ಸಮಾಧಿ ಸ್ಥಳ ಬಿಟ್ಟು ತಂಡ ಕಾಡಿನೊಳಕ್ಕೆ ಪ್ರವೇಶಿಸಿದ್ದು ಅಲ್ಲಿ ಮಾನವ ಅಸ್ಥಿಪಂಜರಗಳು ಪತ್ತೆಯಾಗಿವೆ ಎಂದು ಹೇಳಲಾಗುತ್ತಿದೆ. ಇನ್ನು ಪಾಯಿಂಟ್ 11ರ ಬಳಿ ಸಮಾಧಿ ಅಗೆದ ಜಾಗದಲ್ಲಿ ಅಸ್ಥಿಪಂಜರ ಸಿಕ್ಕಿದೆಯಾ? ಇಲ್ಲವ? ಎಂಬುದು ಇನ್ನೂ ತಿಳಿದುಬಂದಿಲ್ಲ. ಹೆಚ್ಚಿನ ವಿವರಗಳನ್ನು ಅಧಿಕಾರಿಗಳಿಂದ ನಿರೀಕ್ಷಿಸಲಾಗಿದೆ.

ಸ್ಥಳದಲ್ಲಿ ಪುರುಷನದ್ದೆಂದು ಶಂಕಿಸಲಾದ ಮಾನವ ಅಸ್ಥಿಪಂಜರ ಅವಶೇಷಗಳು ಹಗ್ಗ ಮತ್ತು ಕೆಲವು ಬಟ್ಟೆಗಳು ಪತ್ತೆಯಾಗಿವೆ ಎಂದು ಮೂಲಗಳು ತಿಳಿಸಿವೆ. ಸಾವಿಗೆ ನಿಖರವಾದ ಕಾರಣವನ್ನು ನಿರ್ಧರಿಸಲು ಅವಶೇಷಗಳನ್ನು ವಿಧಿವಿಜ್ಞಾನ ವಿಶ್ಲೇಷಣೆಗೆ ಕಳುಹಿಸಲಾಗುವುದು ಮತ್ತು ಪೊಲೀಸರು ಇದು ಆತ್ಮಹತ್ಯೆ ಪ್ರಕರಣ ಎಂದು ಶಂಕಿಸಿದ್ದಾರೆ.

## ನಟಿ ರಮ್ಯಾಗೆ ಅಶ್ಲೀಲ ಮೆಸೇಜ್: ಮತ್ತೆ ನಾಲ್ವರ ಬಂಧನ



ಡಿಜಿಟಲ್ ವಾರ್ತೆ: ನಟ ದರ್ಶನ್ ಫ್ಯಾನ್ಸ್ ಎಂದು ಹೇಳಿಕೊಂಡು ನಟಿ ರಮ್ಯಾ ಅವರಿಗೆ ಫೇಕ್ ಅಕೌಂಟ್‌ಗಳಿಂದ ಅಶ್ಲೀಲ ಮೆಸೇಜ್ ಕಳುಹಿಸಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲೀಸರು ಮತ್ತೆ ನಾಲ್ವರನ್ನು ಬಂಧಿಸಿದ್ದಾರೆ. ಈ ವಿಚಾರದ ಬಗ್ಗೆ ರಮ್ಯಾ ಅವರು ಪೊಲೀಸ್ ಕಮಿಷನರ್ ಬಳಿ ಹೋಗಿ ದೂರು ನೀಡಿದ್ದರು. ಕಾರ್ಯಪ್ರವೃತ್ತರಾಗಿದ್ದ ಪೊಲೀಸರು ಮೊನ್ನೆಯೇ ಮೂವರು ಕಿಡಿಗೇಡಿಗಳನ್ನು ಬಂಧಿಸಿದ್ದರು. ಈಗ ಮತ್ತೆ 4 ಜನರ ಬಂಧನವಾಗಿದೆ.

ನಟಿ ರಮ್ಯಾಗೆ ಅಶ್ಲೀಲ ಮೆಸೇಜ್ ಮಾಡಿದ ಪ್ರಕರಣಕ್ಕೆ ಸಂಬಂಧಿಸಿ 12 ಜನರ ಮಾಹಿತಿಯನ್ನು ಇನ್ಸ್ಟಾಗ್ರಾಂ ಸಂಸ್ಥೆ ಪೊಲೀಸರಿಗೆ ನೀಡಿದೆ. ಇನ್ನುಳಿದ ಆರೋಪಿಗಳಲ್ಲಿ ಕೆಲವರು ಪೋನ್ ಸ್ವಿಚ್ ಆಫ್ ಮಾಡಿಕೊಂಡು ನಾಪತ್ತೆಯಾಗಿದ್ದಾರೆ ಎನ್ನಲಾಗಿದೆ. ಈ ಆರೋಪಿಗಳಲ್ಲಿ ಕಡೂರು ನಿವಾಸಿ ಆರೋಪಿ ರಾಜೇಶ್ ಅತಿ ಹೆಚ್ಚು ಅಶ್ಲೀಲ ಮೆಸೇಜ್ ಮಾಡಿದ್ದಾನೆ. ತನ್ನದೇ ಖಾಸಗಿ ಅಂಗಾಂಗಗಳನ್ನು ಫೋಟೊ ವೀಡಿಯೊ ಮಾಡಿ ರಮ್ಯಾಗೆ ಕಳಿಸಿದ್ದ.ರಾಜೇಶ್, ಓಬಣ್ಣ ಟಿ, ಭುವನ್ ಗೌಡ, ಗಂಗಾಧರ್ ಅರೆಸ್ಟ್ ಆಗಿದ್ದು , ಎಲ್ಲರನ್ನು ಪೊಲೀಸರು ವಿಚಾರಣೆ ನಡೆಸುತ್ತಿದ್ದಾರೆ. ಇನ್ನೂ 30 ಜನರ ಮೇಲೆ ದೂರು ದಾಖಲಾಗಿದೆ ಎನ್ನಲಾಗುತ್ತಿದೆ.

## ಸಾರಿಗೆ ನೌಕರರ ಮುಷ್ಕರ: ಒಂದು ದಿನ ಮುಂದೂಡಲು ಹೈಕೋರ್ಟ್ ಸೂಚನೆ

ಡಿಜಿಟಲ್ ವಾರ್ತೆ: ನಾಳೆಯಿಂದ ಅಂದರೆ ಆಗಸ್ಟ್ ೫ರಿಂದ ರಾಜ್ಯದ ಸಾರಿಗೆ ನೌಕರರು ಮುಷ್ಕರ ನಡೆಸುವುದಾಗಿ ಹೇಳಿದ್ದು , ಅದನ್ನು ಒಂದು ದಿನದ ಮಟ್ಟಿಗೆ ಮುಂದೂಡುವಂತೆ ಹೈಕೋರ್ಟ್ ಸೂಚನೆ ನೀಡಿದೆ.

ಸಾರಿಗೆ ನೌಕರರ ಬೇಡಿಕೆ ಈಡೇರಿಸಿ, ಸಾರ್ವಜನಿಕರಿಗೆ ತೊಂದರೆ ಆಗದಂತೆ ಎಚ್ಚರವಹಿಸಲು ಸರ್ಕಾರಕ್ಕೆ ಸೂಚನೆ ನೀಡುವಂತೆ ವಕೀಲ ಅಮೃತೇಶ್ ಅವರು ಹೈಕೋರ್ಟ್‌ಗೆ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಸಿದ್ದರು. ನ್ಯಾ. ಕೆ.ಎಸ್.ಮುದಗಲ್, ನ್ಯಾ.ಎಂ.ಜಿ.ಎಸ್. ಕಮಲ್ ಅವರ ಪೀಠ ಅರ್ಜಿಯ ವಿಚಾರಣೆ ನಡೆಸಿ, ಪ್ರತಿಭಟನೆ ನಡೆಸದಂತೆ ಸರ್ಕಾರ ಎಸ್ಮಾ ಜಾರಿಗೊಳಿಸಿದೆ ಎಂದು ಕೋರ್ಟ್‌ಗೆ ತಿಳಿಸಿದರು.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

ಡಿಜಿಟಲ್ ವಾರ್ತೆ

## ನ.1 ರೊಳಗೆ ಬಿಬಿಎಂಪಿ ವಾರ್ಡ್ ಪುನರ್ ವಿಂಗಡಣೆ ಪ್ರಕ್ರಿಯೆ ಪೂರ್ಣಗೊಳಿಸಿ: ರಾಜ್ಯ ಸರ್ಕಾರಕ್ಕೆ ಸುಪ್ರೀಂ ಸೂಚನೆ



ಡಿಜಿಟಲ್ ವಾರ್ತೆ: ಬೆಂಗಳೂರು: ಬರುವ ನವೆಂಬರ್ 1 ರೊಳಗೆ ಬಿಬಿಎಂಪಿ ವಾರ್ಡ್ ಪುನರ್ ವಿಂಗಡಣೆ ಪ್ರಕ್ರಿಯೆ ಪೂರ್ಣಗೊಳಿಸಿ ಎಂದು ರಾಜ್ಯ ಸರ್ಕಾರಕ್ಕೆ ಸೋಮವಾರ ಸುಪ್ರೀಂ ಕೋರ್ಟ್ ಕಟ್ಟುನಿಟ್ಟಿನ ಸೂಚನೆ ನೀಡಿದೆ. ಬಿಬಿಎಂಪಿಯನ್ನು 5 ಮಹಾನಗರ ಪಾಲಿಕೆಗಳಾಗಿ ವಿಂಗಡಿಸಲಾಗಿದೆ. ಹೀಗಾಗಿ, ನವೆಂಬರ್ 1 ರೊಳಗೆ ಬಿಬಿಎಂಪಿ ವಾರ್ಡ್ ಪುನರ್ ವಿಂಗಡಣೆ ಪೂರ್ಣಗೊಳಿಸಿ ಎಂದು ಸುಪ್ರೀಂ ಕೋರ್ಟ್ ರಾಜ್ಯ ಸರ್ಕಾರಕ್ಕೆ ನಿರ್ದೇಶನ ನೀಡಿದೆ.

ಕರ್ನಾಟಕ ಮುನ್ಸಿಪಲ್ ಕಾರ್ಪೊರೇಷನ್ (ತಿದ್ದುಪಡಿ) ಕಾಯ್ದೆ, 2020 ರ ಅಡಿಯಲ್ಲಿ ಕಡ್ಡಾಯವಾಗಿ 243 ವಾರ್ಡ್‌ಗಳ ಬದಲಿಗೆ 198 ವಾರ್ಡ್‌ಗಳಿಗೆ ಬಿಬಿಎಂಪಿ ಚುನಾವಣೆ ನಡೆಸಬೇಕೆಂದು ಹೈಕೋರ್ಟ್ ಆದೇಶ ನೀಡಿತ್ತು. ಹೈಕೋರ್ಟ್ ಆದೇಶ ಪ್ರಶ್ನಿಸಿ ಕರ್ನಾಟಕ ಸರ್ಕಾರ ಸುಪ್ರೀಂ ಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿತ್ತು. ಅರ್ಜಿ ವಿಚಾರಣೆಯನ್ನು ನಡೆಸಿದ ನ್ಯಾ. ಸೂರ್ಯಕಾಂತ್ ಅವರ ನೇತೃತ್ವದ ದ್ವಿಸದಸ್ಯ ಪೀಠ, ನವೆಂಬರ್ 1 ರೊಳಗೆ ಬಿಬಿಎಂಪಿ ವಾರ್ಡ್ ಪುನರ್ ವಿಂಗಡಣೆ ಪೂರ್ಣಗೊಳಿಸಿ. ಬಳಿಕ, ವಾರ್ಡ್ ಮತದಾರರ ಪಟ್ಟಿ ರೂಪಿಸಲು ರಾಜ್ಯ ಚುನಾವಣಾ ಆಯೋಗಕ್ಕೆ ಸೂಚನೆ ನೀಡಿ, ವಿಚಾರಣೆಯನ್ನು ನವೆಂಬರ್ 3ಕ್ಕೆ ಮುಂದೂಡಿದೆ.

ಈ ಹಿಂದಿನ ವಿಚಾರಣೆಯ ಸಂದರ್ಭದಲ್ಲಿ ನವೆಂಬರ್ ಅಂತ್ಯದ ಒಳಗೆ ಬಿಬಿಎಂಪಿ ವಾರ್ಡ್ ಪುನರ್ ವಿಂಗಡಣೆ ಹಾಗೂ ಮೀಸಲಾತಿ ಪ್ರಕ್ರಿಯೆ ಮುಗಿಯಲಿದೆ. ಅದಕ್ಕೂ ಮುನ್ನವೂ ಈ ಪ್ರಕ್ರಿಯೆ ಮುಗಿಯುವ ಸಂಭವ ಇದೆ. ಕೋರ್ಟ್ ಸೂಚಿಸಿದರೆ ಶೀಘ್ರ ಚುನಾವಣೆ ನಡೆಸಲು ಸರ್ಕಾರ ಸಿದ್ಧ ಎಂದು ನಗರಾಭಿವೃದ್ಧಿ ಇಲಾಖೆ ಹೆಚ್ಚುವರಿ ಪ್ರಮಾಣ ಪತ್ರ ಸಲ್ಲಿಸಿತ್ತು. ಈ ಸಂಬಂಧ ರಾಜ್ಯ ಸರ್ಕಾರ ಅಫಿಡವಿಟ್ ಕೂಡಾ ಸಲ್ಲಿಕೆ ಮಾಡಿತ್ತು. ಚುನಾವಣಾ ಆಯೋಗ ನವೆಂಬರ್ ಬಳಿಕ ಚುನಾವಣೆ ನಡೆಸಲು ಎರಡು ತಿಂಗಳ ಸಮಯ ಕೇಳಿತ್ತು. ಈ ಹಿನ್ನೆಲೆಯಲ್ಲಿ ಜನವರಿ ಅಥವಾ ಫೆಬ್ರವರಿಯಲ್ಲಿ ಬೆಂಗಳೂರಿನ ಐದೂ ಪಾಲಿಕೆಗಳ ಚುನಾವಣೆ ನಡೆಯುವ ಸಾಧ್ಯತೆ ಇದೆ.

ಚುನಾವಣಾ ಪ್ರಕ್ರಿಯೆ: ನವೆಂಬರ್ 1ರೊಳಗೆ ಕ್ಷೇತ್ರ ಪುನರ್ವಿಂಗಡಣೆ ಪೂರ್ಣಗೊಳಿಸಲಾಗುವುದು. ಬಿಬಿಎಂಪಿ ವಾರ್ಡ್ ಪುನರ್ ವಿಂಗಡಣೆ ಬಳಿಕ ಚುನಾವಣಾ ಪ್ರಕ್ರಿಯೆ ಆರಂಭವಾಗಲಿದೆ ಎಂದು ರಾಜ್ಯ ಸರ್ಕಾರದ ಪರ ಹಿರಿಯ ವಕೀಲ ಅಭಿಷೇಕ್ ಮನು ಸಿಂಘ್ವಿ ವಾದ ಮಂಡಿಸಿದರು. ಬಿಬಿಎಂಪಿ ವಾರ್ಡ್ ಪುನರ್ ವಿಂಗಡಣೆ ಬಳಿಕ ಚುನಾವಣೆ ನಡೆಸಲು 60ರಿಂದ 90 ದಿನ ಬೇಕೆಂದು ರಾಜ್ಯ ಚುನಾವಣಾ ಆಯೋಗದ ಪರ ಹಿರಿಯ ವಕೀಲ ಕೆ.ಎನ್.ಫಣೀಂದ್ರ ಪ್ರತಿವಾದಿಸಿದರು.









Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.